# ಮಂಗಳೂರು ವಿಶ್ವವಿದ್ಯಾನಿಲಯ

(ನ್ಯಾಕ್ ನಿಂದ ಮಾನ್ಯತೆ ಹೊಂದಿದೆ)

ಸಂಖ್ಯೆ: MU/REG/DEV(D5)/33/2025

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ-574199
ದಿನಾಂಕ: 27.02.2026.

## ಸಂದರ್ಶನ ತಿಳುವಳಿಕೆ ಪತ್ರ

ವಿಷಯ: 2025-26ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಆವರಣ(PG) ಮತ್ತು ಘಟಕ ಕಾಲೇಜುಗಳಿಗೆ (UG) ಅಗತ್ಯವಿರುವ ಅತಿಥಿ ಉಪನ್ಯಾಸಕರ ನೇಮಕಾತಿ-ಸಂದರ್ಶನದ ಬಗ್ಗೆ.

ಉಲ್ಲೇಖ: 1. ಈ ಕಛೇರಿ ಅಧಿಸೂಚನೆ ಸಮ ಸಂಖ್ಯೆ: ದಿನಾಂಕ: 18.02.2026 .
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 27.02.2026.

********

2025-26ನೇ ಸಾಲಿಗೆ ಆಯ್ಕೆಯಾಗಿರುವ ಅತಿಥಿ ಉಪನ್ಯಾಸಕರು ರಾಜೀನಾಮೆ ನೀಡಿರುವುದರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಆವರಣ ಮತ್ತು ಘಟಕ ಕಾಲೇಜುಗಳಲ್ಲಿ ತೆರವಾಗಿರುವ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿ ಸಂದರ್ಶನವು ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆಯಲಿರುವುದು. ವಿಷಯವಾರು ಸಂದರ್ಶನದ ದಿನಾಂಕ ಮತ್ತು ಸಮಯವನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

| ದಿನಾಂಕ: 04.03.2026 | | | |
|---|---|---|---|
| | ಪೂರ್ವಾಹ್ನ | | ಅಪರಾಹ್ನ |
| English (UG) | 10.30AM-11.00AM | Physical Education (UG/PG) | 2.30PM-3.00PM |
| Hindi(UG) | 11.00AM-11.15AM | Geography (PG) | 3.00PM-3.15PM |
| Commerce(UG) | 11.45AM-12.30PM | | |
| Economics(UG) | 12.30PM-01.00PM | | |
| Botany(UG) | 01.00PM-01.15PM | | |

ಸೂಚನೆ:

1. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು, ಕಡ್ಡಾಯವಾಗಿ ಎಲ್ಲಾ ಮೂಲ ದಾಖಲೆಗಳೊಂದಿಗೆ ನಿಗದಿತ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಹಾಜರಾಗತಕ್ಕದ್ದು.
2. ಪೂರ್ಣಕಾಲಿಕ ಬೋಧನಾ ಅವಧಿಯನ್ನು ಕಲಾ ಮತ್ತು ವಾಣಿಜ್ಯ ನಿಕಾಯಕ್ಕೆ ವಾರಕ್ಕೆ 16 ಗಂಟೆ ಎಂದು ಹಾಗೂ ವಿಜ್ಞಾನ ನಿಕಾಯಕ್ಕೆ 20 ಗಂಟೆಯೆಂದು ಪರಿಗಣಿಸುವುದು.
3. ಪೂರ್ಣಕಾಲಿಕ ಬೋಧನಾ ಅವಧಿ ಇದ್ದಲ್ಲಿ ಮಾಸಿಕ ಗರಿಷ್ಟ ರೂ. 40,000/-(UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ಮಾತ್ರ) ಮತ್ತು UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದದವರಿಗೆ ಮಾಸಿಕ ಗರಿಷ್ಟ ರೂ. 35,000/- ಸಂಭಾವನೆ ಪಾವತಿ ಮಾಡಲಾಗುವುದು.
4. UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ಕಲಾ ಮತ್ತು ವಾಣಿಜ್ಯ ನಿಕಾಯಕ್ಕೆ 16 ಗಂಟೆಗಿಂತ ಕಡಿಮೆ ಕಾರ್ಯಭಾರ/ ವಿಜ್ಞಾನ ನಿಕಾಯಕ್ಕೆ 20 ಗಂಟೆಗಿಂತ ಕಡಿಮೆ ಕಾರ್ಯಭಾರ ಇದ್ದ ಪಕ್ಷದಲ್ಲಿ ಪ್ರತಿ ಗಂಟೆಯ ಬೋಧನಾ ಅವಧಿಗೆ ರೂ. 650/- ರಂತೆ ಮತ್ತು UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದದವರಿಗೆ ಕಲಾ ಮತ್ತು ವಾಣಿಜ್ಯ ನಿಕಾಯಕ್ಕೆ 16 ಗಂಟೆಗಿಂತ ಕಡಿಮೆ ಕಾರ್ಯಭಾರ/ ವಿಜ್ಞಾನ ನಿಕಾಯಕ್ಕೆ 20 ಗಂಟೆಗಿಂತ ಕಡಿಮೆ ಕಾರ್ಯಭಾರ ಇದ್ದ ಪಕ್ಷದಲ್ಲಿ ಪ್ರತಿ ಗಂಟೆಯ ಬೋಧನಾ ಅವಧಿಗೆ ರೂ. 600/- ರಂತೆ ಸಂಭಾವನೆ ಪಾವತಿಮಾಡಲಾಗುವುದು.

5. ಆಯ್ಕೆಯಾಗುವ ಅಭ್ಯರ್ಥಿಗಳು ವಿಶ್ವವಿದ್ಯಾನಿಲಯವು ವಹಿಸುವ ಇತರ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಬದ್ಧರಿರತಕ್ಕದ್ದು.
6. **ಅವಶ್ಯಕತೆ ಇದ್ದಲ್ಲಿ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವ ಅಧಿಕಾರವನ್ನು ವಿಶ್ವವಿದ್ಯಾನಿಲಯ ಕಾದಿರಿಸಿದೆ.**
7. ಅಭ್ಯರ್ಥಿಗಳು Onlineನಲ್ಲಿ upload ಮಾಡಿದ ಅರ್ಜಿ ಹಾಗೂ ಮೂಲದಾಖಲೆಗಳ ಪ್ರತಿಯನ್ನು ಸಂದರ್ಶನ ದಿನದಂದು ಕಡ್ಡಾಯವಾಗಿ ತರತಕ್ಕದ್ದು.
8. ಆಯ್ಕೆಯಾದ ಅಭ್ಯರ್ಥಿಗಳು ಮಂಗಳೂರು ವಿಶ್ವವಿದ್ಯಾನಿಲಯದ ಯಾವುದೇ ಘಟಕ ಕಾಲೇಜುಗಳಲ್ಲಿ ಸೇವೆ ಸಲ್ಲಿಸಲು ಸಿದ್ಧರಿರಬೇಕು.

ಕುಲಸಚಿವರು

ರಿಗೆ:

ನಿರ್ದೇಶಕರು, ಗಣಕಯಂತ್ರ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ- ಸಂದರ್ಶನದ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಕೋರಲಾಗಿದೆ.